# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ
ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)ಪಿ.ಆರ್/ 197 /2021-22, ದಿನಾಂಕ : 27-08-2021

ದಿನಾಂಕ:: 23-08-2021 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ: 143ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ. ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ವೆನಕೇಶ್ ಆರ್ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ:143 | 9480684415 |
| 3 | ಶ್ರೀ.ಪಿ.ನರಸಿಂಹ | ಕಿರಿಯ ಆರೋಗ್ಯ ಪರಿವೀಕ್ಷಕರು | 8660658637 |
| 4 | ಶ್ರೀ.ಗೋಪಾಲ್ | ಕಿರಿಯ ಅಭಿಯಂತರರು (ಬೆಸ್ಕಾಂ) | 9449870535 |
| 5 | ಶ್ರೀ.ಎನ್.ಎಸ್.ಪ್ರಕಾಶ್ ಎ.ಎಸ್.ಐ | ವಿ.ವಿ.ಪುರಂ ಸಂಚಾರಿ ಪೊಲೀಸ್ ಠಾಣೆ | 080-22943029 |
| 6 | ಹರ್ಷ ಪಿ.ಸಿ. | ವಿ.ವಿ.ಪುರಂ ಸಂಚಾರಿ ಪೊಲೀಸ್ ಠಾಣೆ | - |
| 7 | ಶ್ರೀ.ನವೀನ್ ಕುಮಾರ್.ಎಂ. | ವಿ.ವಿ.ಪುರಂ | 9880359497 |
| 8 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 9 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 10 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 11 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |

Scanned by CamScanner

ದಿನಾಂಕ: 23-08-2021 ರಂದು ನಡೆದ ವಾರ್ಡ್ -143 ರ ಸಮಿತಿ ಸಭೆಯ ನಡಾವಳಿಗಳು:

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲು ಎಂ.ಎಂ.ವಿ.ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ವೆಂಕಟೇಶ್‌ರವರು ಮಾತನಾಡಿ ಎಂ.ಎಂ.ವಿ.ರಸ್ತೆಯಲ್ಲಿನ ಮನೆಗಳಿಗೆ ತೆಗೆದುಕೊಂಡಿರುವ ನೀರಿನ ಸಂಪರ್ಕದ ಬಿಲ್‌ಗಳನ್ನು BWSSB ರವರು Meter Read ಮಾಡದೇ ಅತಿ ಹೆಚ್ಚಾಗಿ ನಮೂದಿಸಿರುತ್ತಾರೆ. ಈ ಬಗ್ಗೆ BWSSB ಇಂಜಿನಿಯರ್ ಶ್ರೀ. ಪ್ರಹ್ಲಾದ್ ರವರನ್ನು ದೂರವಾಣಿ ಮುಖಾಂತರ ವಿಚಾರಿಸೋಣವೆಂದು ಕರೆ ಮಾಡಿದರೆ ಯಾವುದೇ ಪ್ರತಿಕ್ರಿಯೆ ನೀಡುತ್ತಿಲ್ಲವೆಂದು ಸಭೆಗೆ ತಿಳಿಸಿದರು. ಇದೇ ರೀತಿಯ ಸಮಸ್ಯೆಯು ದೊಡ್ಡ ಮಾವಳ್ಳಿಯ ಆಪ್ಪಯ್ಯಣ್ಣ ರಸ್ತೆಯಲ್ಲಿಯೂ ಇರುವುದಾಗಿ ಶ್ರೀ.ಮೋಹನ್‌ರಾಜ್ ಎಂಬುವವರು ಕೂಡ ದೂರನ್ನು ನೀಡಿರುತ್ತಾರೆ. ಈ ಬಗ್ಗೆ ಸ್ಪಷ್ಟನೆ ನೀಡಲು ಸಭೆಯಲ್ಲಿ ಹಾಜರಿದ್ದ BWSSB Inspector ಶ್ರೀ.ನವೀನ್‌ಕುಮಾರ್ ರವರಿಗೆ ಸೂಚಿಸಲಾಗಿ ಈ ಬಗ್ಗೆ ಪರಿಶೀಲಿಸಿ ತಿಳಿಸುವುದಾಗಿ ಸಭೆಗೆ ತಿಳಿಸಿದರು.

ನಂತರ ಪುನಃ ಶ್ರೀ.ವೆಂಕಟೇಶ್‌ರವರು ಮಾತನಾಡಿ ಎಂ.ಎಂ.ವಿ.ರಸ್ತೆ ಮತ್ತು ನ್ಯಾಷನಲ್ ಹೈ ಸ್ಕೂಲ್ ರಸ್ತೆಗಳು ಸೇರುವ ಜಾಗದಲ್ಲಿ ಒಂದು Hump ಅನ್ನು ನಿರ್ಮಿಸಲು ಕೋರಿದರು. ಈ ಸ್ಥಳದಲ್ಲಿ ಸರಗಳ್ಳತನ ಆಗಾಗ್ಗೆ ನಡೆಯುತ್ತಿದ್ದು ಮತ್ತು ವಾಹನಗಳನ್ನು ಅತಿ ವೇಗವಾಗಿ ಸಾರ್ವಜನಿಕರು ಓಡಿಸುವುದರಿಂದ ತೊಂದರೆಯಾಗುತ್ತಿದ್ದು ಈ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಬೇಕೆಂದು ಸಭೆಗೆ ತಿಳಿಸಿದರು. ಈ ಸಂಬಂಧ ಸೂಕ್ತ ಕ್ರಮ ವಹಿಸಲು ಬಿ.ಬಿ.ಎಂ.ಪಿ ಟ್ರಾಫಿಕ್ ಇಂಜಿನಿಯರಿಂಗ್ ಸೆಲ್ (TEC) ರವರಿಗೆ ತಿಳಿಸಲಾಗುವುದೆಂದು ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ನಂತರ ವೆಂಕಟೇಶ್ ರವರು ಪುನಃ ಮಾತನಾಡಿ ಕನಕಪುರ ರಸ್ತೆಯಲ್ಲಿರುವ ವಿಜಯ್ ವ್ಹೀಲ್ ಅಲೈನ್‌ಮೆಂಟ್ ಮುಂಭಾಗ (ಜೈನ್ ಕಾಲೇಜ್ ಹತ್ತಿರ) ಒಣಗಿದ ಮರದ ಕೊಂಬೆಯೊಂದು ಇದ್ದು ಯಾವುದೇ ಸಮಯದಲ್ಲಾದರೂ ಮುರಿದು ಬೀಳುವ ಸಂಭವವಿರುತ್ತದೆ. ಇದರಿಂದಾಗಿ ಸಾರ್ವಜನಿಕರ ಜೀವಕ್ಕೆ ಅಪಾಯವಿರುವುದಾಗಿ ತಿಳಿಸಿ, ಇದನ್ನು ಕೂಡಲೇ ತೆರವುಗೊಳಿಸಬೇಕೆಂದು ಸಭೆಗೆ ತಿಳಿಸಿದರು. ಈ

Scanned by CamScanner

ಬಗ್ಗೆ ಕೂಡಲೇ ಕ್ರಮ ವಹಿಸಲು BBMP Forest ವಿಭಾಗಕ್ಕೆ ತಿಳಿಸುವುದಾಗಿ ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ಓ.ವಿ.ಜಯಕುಮಾರ್ ರವರು ಮಾತನಾಡಿ ಈ ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಿದ್ದ ವಿಷಯವಾದ High Rise Pedastrian Crossing ಅಳವಡಿಸುವ ಕೆಲಸವನ್ನು ಡಯಾಗನಲ್ ರಸ್ತೆ ಮತ್ತು ಸಜ್ಜನ್‌ರಾವ್ ರಸ್ತೆಗಳಲ್ಲಿ ಮಾಡಿರುವುದಕ್ಕೆ ಧನ್ಯವಾದಗಳನ್ನು ತಿಳಿಸಿದರು. ನಂತರ ವಾರ್ಡ್ ವ್ಯಾಪ್ತಿಯಲ್ಲಿರುವ ಟ್ರಾಫಿಕ್ ಸಿಗ್ನಲ್‌ಗಳಲ್ಲಿ ಹಲವಾರು ಕಡೆ Timer ಅಳವಡಿಸಿರುವುದಿಲ್ಲವೆಂದು ತಿಳಿಸಿ ಇವುಗಳನ್ನು ಅಳವಡಿಸಲು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸಭೆಗೆ ತಿಳಿಸಿದರು. ಈ ಬಗ್ಗೆ ಸೂಕ್ತ ಕ್ರಮ ವಹಿಸಲು ಸಭೆಯಲ್ಲಿ ಹಾಜರಿದ್ದ ಸಂಚಾರ ವಿಭಾಗದ ಸಹಾಯಕ ಪೋಲಿಸ್ ಇನ್ಸ್‌ಪೆಕ್ಟರ್ ರವರಿಗೆ ನೋಡಲ್ ಅಧಿಕಾರಿಗಳು ತಿಳಿಸಿದರು.

ನಂತರ ಶ್ರೀ.ವೆಂಕಟೇಶ್ ರವರು ಮಾತನಾಡಿ ಡಯಾಗನಲ್ ರಸ್ತೆಯಲ್ಲಿ ಇತ್ತೀಚೆಗೆ ನಿರ್ವಹಿಸಲಾದ ಫುಟ್‌ಪಾತ್ ಕಾಮಗಾರಿಯಲ್ಲಿ ರಸ್ತೆ ಬದಿಚರಂಡಿಯ ಮೇಲೆ ಅಳವಡಿಸಲಾದ ಚಪ್ಪಡಿ ಕಲ್ಲುಗಳನ್ನು ಸರಿಯಾಗಿ ಜೋಡಣೆ ಮಾಡದಿರುವ ಪ್ರಯುಕ್ತ ಚಪ್ಪಡಿಗಳು ಒಡೆದು ಹೋಗಿದ್ದು ಇದನ್ನು ಸರಿಪಡಿಸಲು ಸಭೆಗೆ ತಿಳಿಸಿದರು. ಈ ಬಗ್ಗೆ ಸೂಕ್ತ ಕ್ರಮ ವಹಿಸಲು ಬಿಬಿಎಂಪಿ ರಸ್ತೆ ಮೂಲಭೂತ ಸೌಕರ್ಯ ವಿಭಾಗದ ಅಭಿಯಂತರರಿಗೆ ತಿಳಿಸಲಾಗುವುದೆಂದು ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ನಂತರ ಕಾರ್ಯದರ್ಶಿಗಳ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

27/8/2021.
ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ –143 ವಿ. ವಿ.ಪುರಂ

27/8/2021
ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 143 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)

Scanned by CamScanner